ಕರ್ನಾಟಕ ಸರ್ಕಾರ

ಸಂಖ್ಯೆ: ಪಪೂಶಿ/ಸಿಬ್ಬಂದಿ-1/ಎ(3)/ಕಾ.ವರದಿ 175/2014-15

ನಿರ್ದೇಶಕರ ಕಚೇರಿ,
ಪದವಿ ಪೂರ್ವ ಶಿಕ್ಷಣ ಇಲಾಖೆ,
18ನೇ ಅಡ್ಡರಸ್ತೆ, ಮಲ್ಲೇಶ್ವರಂ,
ಬೆಂಗಳೂರು-560012.
ದಿನಾಂಕ: 12-03-2015

## ಜ್ಞಾಪನ

ವಿಷಯ: ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಗ್ರೂಪ್ ಎ ವೃಂದ ಮತ್ತು ಗ್ರೂಪ್ ಸಿ ವೃಂದದ 2014-15ನೇ ಸಾಲಿನ ಕಾರ್ಯ ನಿರ್ವಹಣಾ ವರದಿ ಮತ್ತು ಆಸ್ತಿ-ಋಣಭಾರ ಪಟ್ಟಿ ಸಲ್ಲಿಸುವ ಬಗ್ಗೆ.

ಉಲ್ಲೇಖ: 1. ಕರ್ನಾಟಕ ನಾಗರಿಕ ಸೇವಾ (ವರ್ತನೆ) ನಿಯಮಗಳು 1966
2. ಕರ್ನಾಟಕ ನಾಗರಿಕ ಸೇವಾ (ಕಾರ್ಯ ನಿರ್ವಹಣಾ ವರದಿ) ನಿಯಮಗಳು 2000

-*-

ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕರ ಕಚೇರಿ ಹಾಗೂ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಗ್ರೂಪ್ ಎ ವೃಂದದ ಉಪನಿರ್ದೇಶಕರ, ಪ್ರಾಚಾರ್ಯರುಗಳ ಮತ್ತು ಗ್ರೂಪ್ ಸಿ ವೃಂದದ ಅಧೀಕ್ಷಕರ, ಪ್ರಥಮ ದರ್ಜೆ ಸಹಾಯಕರ, ದ್ವಿತೀಯ ದರ್ಜೆ ಸಹಾಯಕರ (ಎಲ್ಲಾ ಗ್ರೂಪ್ ಸಿ ವೃಂದ) 2014-15 ನೇ ಸಾಲಿನ ಕಾರ್ಯ ನಿರ್ವಹಣಾ ವರದಿಯನ್ನು ಉಲ್ಲೇಖ 2 ರ ನಿಯಮಗಳಂತೆ ಮತ್ತು ಉಲ್ಲೇಖ 1 ರ ನಿಯಮ 23 ರ ಪ್ರಕಾರ ಆಸ್ತಿ ಮತ್ತು ಋಣಭಾರ ಪಟ್ಟಿಯೊಂದಿಗೆ ದಿನಾಂಕ: 20.04.2015 ರ ಒಳಗಾಗಿ ಈ ಕಚೇರಿಗೆ ಸಲ್ಲಿಸಲು ತಿಳಿಸಿದೆ.

***ಉಪನಿರ್ದೇಶಕರ, ಪ್ರಾಚಾರ್ಯರುಗಳ ಮತ್ತು ಗ್ರೂಪ್ ಸಿ ವೃಂದದ ನೌಕರರ ಕಾರ್ಯ ನಿರ್ವಹಣಾ ವರದಿ ಮತ್ತು ಆಸ್ತಿ ಋಣಭಾರ ಪಟ್ಟಿಯನ್ನು "ಶ್ರೀ ಎಸ್ ಭೈರೇಗೌಡ, ಸಹಾಯಕ ನಿರ್ದೇಶಕರು, ಸಿಬ್ಬಂದಿ ಶಾಖೆ-1, ನಿರ್ದೇಶಕರ ಕಚೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು 560012" ಈ ವಿಳಾಸಕ್ಕೆ ವೃಂದವಾರು ಪ್ರತ್ಯೇಕ ಬಂಡಲ್‌ಗಳನ್ನು ಮಾಡಿ ನಿಗಧಿ ದಿನಾಂಕದೊಳಗೆ ಸಲ್ಲಿಸಲು ತಿಳಿಸಿದೆ. ಸಲ್ಲಿಸದೇ ಇರುವ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಶಿಸ್ತುಕ್ರಮ ಜರುಗಿಸಲಾಗುವುದು.***

ಜಂಟಿ ನಿರ್ದೇಶಕರು (ಆಡಳಿತ)
ಪದವಿ ಪೂರ್ವ ಶಿಕ್ಷಣ ಇಲಾಖೆ.

ಪ್ರತಿ:

1. ನಿರ್ದೇಶಕರ ಆಪ್ತ ಸಹಾಯಕರು, ಆಪ್ತ ಶಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು.
2. ಎಲ್ಲಾ ಜಂಟಿನಿರ್ದೇಶಕರು/ಉಪನಿರ್ದೇಶಕರು/ಸಹಾಯಕ ನಿರ್ದೇಶಕರುಗಳಿಗೆ
3. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳಿಗೆ.
4. ರಾಜ್ಯದ ಎಲ್ಲಾ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಚಾರ್ಯರುಗಳಿಗೆ ಜಿಲ್ಲಾ ಉಪನಿರ್ದೇಶಕರ ಮೂಲಕ.
5. ಸಹಾಯಕ ನಿರ್ದೇಶಕರು (ಇ-ಆಡಳಿತ), ಅಂತರ್ಜಾಲದಲ್ಲಿ ಪ್ರಕಟಿಸಲು ಕೋರಿದೆ.
6. ಕಚೇರಿ ಪ್ರತಿ.

G:\2014-15\PERFOR REPORT\2013-14 PR'S.docx